ಕರ್ನಾಟಕ ಸರ್ಕಾರ

# ರಾಷ್ಟ್ರೀಯ ಆರೋಗ್ಯ ಅಭಿಯಾನ

ಕರ್ನಾಟಕ ರಾಜ್ಯ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಂಘ, ಬೆಂಗಳೂರು
ಆರೋಗ್ಯ ಸೌಧ, 1ನೇ ಮಹಡಿ, ಮಾಗಡಿ ರಸ್ತೆ, ಬೆಂಗಳೂರು-560023

ಸಂಖ್ಯೆ:ಎನ್‌ಹೆಚ್‌ಎಂ/ಡಿಡಿ/ಐಎಂಎಂ/82/2021-22 ದಿನಾಂಕ:21.01.2022

ಇವರಿಗೆ,

1. ಮುಖ್ಯ ಆಯುಕ್ತರು, ಬಿಬಿಎಂಪಿ
2. ಎಲ್ಲಾ ಜಿಲ್ಲೆಯ ಜಿಲ್ಲಾಧಿಕಾರಿಗಳು-ಜಿಲ್ಲಾಡಳಿತ ಕಛೇರಿ

ಮಾನ್ಯರೆ,

ವಿಷಯ: ಭಾರತ ಸರ್ಕಾರದ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಮಂತ್ರಾಲಯವು ವ್ಯಾಖ್ಯಾನಿಸಿದ ಮುಂಚೂಣಿ ಕಾರ್ಯಕರ್ತರಿಗೆ ಕೋವಿಡ್-19 ಲಸಿಕೆಯ ಮುನ್ನೆಚ್ಚರಿಕೆ ಡೋಸ್‌ನ ಲಸಿಕಾಕರಣ ಕುರಿತು

ಉಲ್ಲೇಖ: ದಿನಾಂಕ: 20.01.2022 ರಂದು ಮಾನ್ಯ ಅಪರ ಮುಖ್ಯ ಕಾರ್ಯದರ್ಶಿಗಳು ಹಾಗೂ ಅಭಿವೃದ್ಧಿ ಆಯುಕ್ತರು, ಕರ್ನಾಟಕ ಸರ್ಕಾರ ರವರ ಅಧ್ಯಕ್ಷತೆಯಲ್ಲಿ ನಡೆದ ಸಭೆಯಲ್ಲಿ ಚರ್ಚಿಸಿ ನಿರ್ದೇಶಿಸಿದಂತೆ.

*******

ಮೇಲ್ಕಂಡ ವಿಷಯಕ್ಕೆ ಸಂಬಂಧಿಸಿದಂತೆ, ಭಾರತ ಸರ್ಕಾರದ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಮಂತ್ರಾಲಯವು ಕಂದಾಯ ಇಲಾಖೆ, ಗೃಹ ಇಲಾಖೆ, ನಗರಾಭಿವೃದ್ಧಿ ಇಲಾಖೆ, ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆಯ ಸಿಬ್ಬಂದಿಯನ್ನು ಮುಂಚೂಣಿ ಕಾರ್ಯಕರ್ತರೆಂದು ಹಾಗೂ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿಯ ಸಿಬ್ಬಂದಿಗಳನ್ನು ಆರೋಗ್ಯ ಕಾರ್ಯಕರ್ತರೆಂದು ವ್ಯಾಖ್ಯಾನಿಸಿದ್ದು ಸದರಿಯವರಿಗೆ ರಾಜ್ಯದಲ್ಲಿ ದಿನಾಂಕ: 10.01.2022 ರಿಂದ ಕೋವಿಡ್-19 ಲಸಿಕೆಯ ಮುನ್ನೆಚ್ಚರಿಕೆ ಡೋಸ್‌ನ ಲಸಿಕಾಕರಣವನ್ನು ಪ್ರಾರಂಭಿಸಲಾಗಿದೆ.

ದಿನಾಂಕ:20.01.2022 ರಂದು ಮಾನ್ಯ ಅಪರ ಮುಖ್ಯ ಕಾರ್ಯದರ್ಶಿಗಳು ಹಾಗೂ ಅಭಿವೃದ್ಧಿ ಆಯುಕ್ತರು ಕರ್ನಾಟಕ ಸರ್ಕಾರ ರವರ ಅಧ್ಯಕ್ಷತೆಯಲ್ಲಿ ನಡೆದ ಸಭೆಯಲ್ಲಿ ಸದರಿ ಇಲಾಖೆಗಳ ಮುಖ್ಯಸ್ಥರೊಂದಿಗೆ ಮುಂಚೂಣಿ ಕಾರ್ಯಕರ್ತರ ಮುನ್ನೆಚ್ಚರಿಕೆ ಡೋಸ್ ಲಸಿಕಾಕರಣದ ಪ್ರಗತಿಯ ಗತಿಯನ್ನು ವೃದ್ಧಿಸಲು ಸೂಚಿಸಿದರು. ಈ ನಿಟ್ಟಿನಲ್ಲಿ ಆಯಾ ಇಲಾಖೆಯ ಸಿಬ್ಬಂದಿ ಕೋವಿಡ್-19 ಲಸಿಕೆಯ 2ನೇ ಡೋಸ್ ಪಡೆದು 9 ತಿಂಗಳು (39 ವಾರಗಳು) ಪೂರೈಸಿದವರಿಗೆ ಕೋವಿಡ್-19 ಲಸಿಕೆಯ ಮುನ್ನೆಚ್ಚರಿಕೆ ಡೋಸ್ ಅನ್ನು ನೀಡುವ ನಿಟ್ಟಿನಲ್ಲಿ ಕ್ರಮಕೈಗೊಳ್ಳಲು ಕೋರಲಾಗಿದೆ ಹಾಗೂ ದೈನಂದಿನ ಪ್ರಗತಿಯ ವರದಿಯನ್ನು ಈ ಕೆಳಕಂಡ ಗೂಗಲ್ ಸ್ಪ್ರೆಡ್‌ಶೀಟ್ ನಲ್ಲಿ ನಮೂದಿಸಿ ಪ್ರಗತಿಯನ್ನು ಮೇಲ್ವಿಚಾರಣೆ ಮಾಡಲು ಕೋರಲಾಗಿದೆ.

https://docs.google.com/spreadsheets/d/1L3MpAJywWXOmDhBtabVcuxQ15vG2qz5Ef-JxW7ftr3Y/edit#gid=18716790

(ಸಹಿ)

ಅಭಿಯಾನ ನಿರ್ದೇಶಕರು
ರಾಷ್ಟ್ರೀಯ ಆರೋಗ್ಯ ಅಭಿಯಾನ

ಸೂಕ್ತ ಕ್ರಮಕ್ಕಾಗಿ:

1. ಎಲ್ಲಾ ಜಿಲ್ಲೆಯ ಜಿಲ್ಲಾ ಆರೋಗ್ಯ ಮತ್ತ ಕುಟುಂಬ ಕಲ್ಯಾಣ ಅಧಿಕಾರಿಗಳು.
2. ಮುಖ್ಯ ಆರೋಗ್ಯಾಧಿಕಾರಿಗಳು (ಸಾರ್ವಜನಿಕ ಆರೋಗ್ಯ), ಬಿಬಿಎಂಪಿ.

3. ಎಲ್ಲಾ ಜಿಲ್ಲೆಯ ಆರ್.ಸಿ.ಹೆಚ್ ಅಧಿಕಾರಿಗಳು,
4. ಲಸಿಕಾಧಿಕಾರಿಗಳು (ಬಿ.ಬಿ.ಎಂ.ಪಿ).

**ಮಾಹಿತಿಗಾಗಿ:**

1. ಮಾನ್ಯ ಅಪರ ಮುಖ್ಯ ಕಾರ್ಯದರ್ಶಿಗಳು ಹಾಗೂ ಅಭಿವೃದ್ಧಿ ಆಯುಕ್ತರು, ಕರ್ನಾಟಕ ಸರ್ಕಾರ.
2. ಮಾನ್ಯ ಅಪರ ಮುಖ್ಯ ಕಾರ್ಯದರ್ಶಿಗಳು, ಗೃಹ ಇಲಾಖೆ, ಕರ್ನಾಟಕ ಸರ್ಕಾರ.
3. ಮಾನ್ಯ ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿಗಳು, ನಗರಾಭಿವೃದ್ಧಿ ಇಲಾಖೆ, ಕರ್ನಾಟಕ ಸರ್ಕಾರ.
4. ಮಾನ್ಯ ಪ್ರಧಾನ ಕಾರ್ಯದರ್ಶಿಗಳು, ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆ, ಕರ್ನಾಟಕ ಸರ್ಕಾರ.
5. ಮಾನ್ಯ ಸರ್ಕಾರದ ಪ್ರಧಾನ ಕಾರ್ಯದರ್ಶಿಗಳು, ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ (ಪಂಚಾಯತ್ ರಾಜ್) ಇಲಾಖೆ, ಕರ್ನಾಟಕ ಸರ್ಕಾರ.
6. ಮಾನ್ಯ ಸರ್ಕಾರದ ಪ್ರಧಾನ ಕಾರ್ಯದರ್ಶಿಗಳು, ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ, ಕರ್ನಾಟಕ ಸರ್ಕಾರ.
7. ಮಾನ್ಯ ಸರ್ಕಾರದ ಪ್ರಧಾನ ಕಾರ್ಯದರ್ಶಿಗಳು, ಕಂದಾಯ ಇಲಾಖೆ, ಕರ್ನಾಟಕ ಸರ್ಕಾರ.
8. ಮಾನ್ಯ ಸರ್ಕಾರದ ಕಾರ್ಯದರ್ಶಿಗಳು, ನಗರಾಭಿವೃದ್ಧಿ ಇಲಾಖೆ, ಕರ್ನಾಟಕ ಸರ್ಕಾರ.
9. ಆಯುಕ್ತರು, ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸೇವೆಗಳು, ಬೆಂಗಳೂರು.
10. ವಿಶೇಷ ಆಯುಕ್ತರು (ಆರೋಗ್ಯ), ಬಿಬಿಎಂಪಿ.
11. ಎಲ್ಲಾ ಜಿಲ್ಲಾ ಮುಖ್ಯ ಕಾರ್ಯನಿರ್ವಾಹಕಾಧಿಕಾರಿಗಳು, ಜಿಲ್ಲಾ ಪಂಚಾಯತ್ ಕಛೇರಿ.
12. ನಿರ್ದೇಶಕರು, ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸೇವೆಗಳ ನಿರ್ದೇಶನಾಲಯ, ಬೆಂಗಳೂರು.
13. ಎಲ್ಲಾ ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿಗಳು.
14. ಅಪರ ನಿರ್ದೇಶಕರು, ರಾಷ್ಟ್ರೀಯ ಆರೋಗ್ಯ ಅಭಿಯಾನ, ಬೆಂಗಳೂರು.
15. ಯೋಜನಾ ನಿರ್ದೇಶಕರು (ಆರ್.ಸಿ.ಹೆಚ್), ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸೇವೆಗಳ ನಿರ್ದೇಶನಾಲಯ, ಬೆಂಗಳೂರು.
16. ಉಪ ನಿರ್ದೇಶಕರು, ರಾಷ್ಟ್ರೀಯ ಆರೋಗ್ಯ ಅಭಿಯಾನ, ಬೆಂಗಳೂರು.
17. ಉಪ ನಿರ್ದೇಶಕರು (ಲಸಿಕೆ), ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸೇವೆಗಳ ನಿರ್ದೇಶನಾಲಯ, ಬೆಂಗಳೂರು.
18. ಕಛೇರಿ ಪ್ರತಿ.